ಸಂಗೊಳ್ಳಿ ಗ್ರಾಮದಲ್ಲಿ ಮಲಪ್ರಭಾ ಮುಳುಗಡೆ ಪ್ರದೇಶದ ಜನರ ಅನುಕೂಲತೆಗಾಗಿ 7 ಶಾಲಾ ಕೋಣೆಗಳನ್ನು ಕಟ್ಟಿಸುವುದು.

76 - ಶ್ರೀ ಶಿವಾನಂದ ಹೆಚ್. ಕೌಜಲಗಿ, (ಬೈಲಹೊಂಗಲ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿ ಗ್ರಾಮದಲ್ಲಿ ಮಲಪ್ರಭಾ ಮುಳುಗಡೆ ಪ್ರದೇಶದ ಜನರ ಅನುಕೂಲತೆಗಾಗಿ 7 ಶಾಲಾ ಕೋಣೆಗಳನ್ನು ಕಟ್ಟಲು ಆಡಳಿತಾತ್ಮಕ ಮಂಜೂರಾತಿ ಹಾಗೂ ತಾಂತ್ರಿಕ ಮಂಜೂರಾತಿಯನ್ನು ಎಂದು ಕೊಡಲಾಯಿತು;

ಆ) ಆಡಳಿತಾತ್ಮಕ ಹಾಗೂ ತಾಂತ್ರಿಕ ಮಂಜೂರಾತಿಗೆ ನೀಡಲಾದ ಮೊತ್ತವೆಷ್ಟು;

ಇ) ಆಡಳಿತಾತ್ಮಕ ಹಾಗೂ ತಾಂತ್ರಿಕ ಮಂಜೂರಾತಿಯನ್ನು ನೀಡಿದ್ದರೂ ಕೂಡ ಇದುವರೆಗೂ ಶಾಲಾ ಕೋಣೆ ಕಟ್ಟುವ ಕೆಲಸ ಪ್ರಾರಂಭವಾಗದೇ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಸರ್ಕಾರದವರು ಸದನದಲ್ಲಿ ಆಶ್ವಾಸನೆ ನೀಡಿದ ಪ್ರಕಾರ ಇನ್ನು ಎಷ್ಟು ದಿವಸಗಳಲ್ಲಿ ಈ ಕೋಣೆ ಕಟ್ಟುವ ಕೆಲಸವನ್ನು ಪ್ರಾರಂಭ ಮಾಡುವರು ಹಾಗೂ ಇನ್ನು ಎಷ್ಟು ದಿವಸಗಳಲ್ಲಿ ಪೂರ್ಣಗೊಳಿಸುವರು?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು):

ಅ) ಹಳೆಯ 8 ಶಾಲಾ ಕೋಣೆಗಳ ಕಟ್ಟಡವನ್ನು ಕೆಡವಿ ಅದರ ಸಾಮಗ್ರಿಗಳನ್ನು ಉಪಯೋಗಿಸಿ, ಹೊಸ ಶಾಲಾ ಕಟ್ಟಡವನ್ನು ನಿರ್ಮಾಣ ಮಾಡಲು ಜುಲೈ 93ರಲ್ಲಿ ಅನುಮತಿ ನೀಡಲಾಗಿದೆ ಮತ್ತು ಆಗಸ್ಟ್ 93ರಲ್ಲಿ ತಾಂತ್ರಿಕ ಮಂಜೂರಾತಿ ನೀಡಲಾಗಿದೆ.

ಆ) 9.38 ಲಕ್ಷ ರೂ.ಗಳು.

ಇ) ಬಂದಿದೆ.

ಈ) ಸದರೀ ಕಾಮಗಾರಿಗೆ ಎರಡು ಸಲ ಟೆಂಡರ್ ಕರೆದರೂ ಯಾವ ಗುತ್ತಿಗೆದಾರರು ಟೆಂಡರನ್ನು ಹಾಕಿರುವುದಿಲ್ಲ.

ಸದರೀ ಕಾಮಗಾರಿಯನ್ನು ಇಲಾಖೆಯ ನಿಯಮಾನುಸಾರ ಮಾಡಿ ಮುಗಿಸಲು ಶೀಘ್ರದಲ್ಲಿ ಕ್ರಮ ಕೈಗೊಳ್ಳಲಾಗುವುದು. ಕ್ರಮ ಕೈಗೊಂಡು ಒಂದು ವರ್ಷದ ಅವಧಿ ಒಳಗೆ ಮುಗಿಸಲಾಗುವುದು.

ಬೈಲಹೊಂಗಲ ತಾಲ್ಲೂಕಿನ ವಣ್ಣೂರು, ನೇಸರ್ಗಿ ರಾಜ್ಯ ಹೆದ್ದಾರಿಯನ್ನು ಅಭಿವೃದ್ಧಿ ಪಡಿಸುವುದು.

80 - ಶ್ರೀ ಶಿವಾನಂದ ಹೆಚ್. ಕೌಜಲಗಿ, (ಬೈಲಹೊಂಗಲ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ವಣ್ಣೂರು, ನೇಸರ್ಗಿ ರಸ್ತೆ ರಾಜ್ಯ ಹೆದ್ದಾರಿಯಾಗಿದ್ದರೂ ಕೂಡ, ಇದುವರೆಗೂ ಆ ರಸ್ತೆ ಮೇಲೆ ಹೆಚ್ಚಿನ ಅಭಿವೃದ್ಧಿ ಮಾಡದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಆ ರಸ್ತೆಯಲ್ಲಿ ಮಲಪ್ರಭಾ ಸಕ್ಕರೆ ಕಾರ್ಖಾನೆ ಘಟಪ್ರಭಾ ಸಕ್ಕರೆ ಕಾರ್ಖಾನೆ ಸಂಕೇಶ್ವರ ಸಕ್ಕರೆ ಕಾರ್ಖಾನೆ ಹಾಗೂ ಚಿಕ್ಕೋಡಿ ಸಕ್ಕರೆ ಕಾರ್ಖಾನೆಗಳ ಗಾಡಿಗಳು ಈ ರಸ್ತೆಯ ಮೇಲೆ ಹಾಯುತ್ತಿದ್ದು, ಆ ರಸ್ತೆಯು ಅತಿ ಮೇಲಿಂದ ಮೇಲೆ ನಾದುರಸ್ತಿ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;